## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1306 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ |
| ಉತ್ತರಿಸುವ ದಿನಾಂಕ | 19.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾನ ಕರ್ತವ್ಯಕ್ಕೆ ಸಮಾನ ವೇತನ ಎಂಬ ನಿಯಮವಿದ್ದು, ರಾಜ್ಯಾದ್ಯಾಂತ ಎರಡೂವರೆ ಸಾವಿರ ದೇವಾಲಯಗಳ ನೌಕರರು ವೇತನ ತಾರತಮ್ಯಕ್ಕೆ ಒಳಗಾಗಿ ಬದುಕು ನಡೆಸು ದುಸ್ತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯಗಳ ನೌಕರರ ವೇತನದಲ್ಲಿ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಸದರಿ ನೌಕರರ ವೇತನ ತಾರತಮ್ಯ ನಿವಾರಣೆ ಹಾಗೂ ವೇತನ ಪರಿಷ್ಕರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997 ಕಲಂ 36ರನ್ವಯ ಅರ್ಚಕರ ಮತ್ತು ದೇವಸ್ಥಾನ ನೌಕರರ ವೇತನಗಳು ಅದರ ಒಟ್ಟು ವಾರ್ಷಿಕ ವರಮಾನದ ಶೇಕಡ 35ರಷ್ಟನ್ನು ಮೀರತಕ್ಕದ್ದಲ್ಲ ಎಂದಿರುತ್ತದೆ. ಆದ್ದರಿಂದ, ಈ ಮಿತಿಯೊಳಗೆ ದೇವಾಲಯದ ನೌಕರರ ವೇತನವನ್ನು ನಿಗದಿಪಡಿಸಬೇಕಾಗಿರುತ್ತದೆ.<br><br>ಇಲಾಖೆಯ ಕಾಯ್ದೆ ಮತ್ತು ನಿಯಮಗಳು ಜಾರಿಗೆ ಬರುವ ಪೂರ್ವದಲ್ಲಿಯೇ ಕೆಲವು ದೇವಾಲಯದ ನೌಕರರು ಸರ್ಕಾರದ ವೇತನ ಶ್ರೇಣಿಯನ್ನು ಪಡೆದು ಕರ್ತವ್ಯವನ್ನು ನಿರ್ವಹಿಸುತ್ತಾ ಬರುತ್ತಿದ್ದಾರೆ.<br><br>ಸರ್ಕಾರಿ ವೇತನ ಶ್ರೇಣಿಯನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿದ್ದ ದೇವಾಲಯದ ನೌಕರರ ವೇತನಕ್ಕೂ, ಹಾಗೂ ವೇತನ ಶ್ರೇಣಿ ನಿಗದಿಯಾಗದೇ ಕರ್ತವ್ಯ ನಿರ್ವಹಿಸುತ್ತಿರುವ ಬಾಕಿ ಉಳಿದ ದೇವಾಲಯದ ನೌಕರರು ತಾತ್ಕಾಲಿಕ ನೆಲೆಯಲ್ಲಿ, ಅಂದರೆ ಸಂಚಿತ, ಓಚರ್, ಎನ್.ಎಂ.ಆರ್, ದಿನಗೂಲಿ, ಹಂಗಾಮಿ, ನಿಗಧಿತ ವೇತನ, ಕಾರ್ಯಾರ್ಥ ಏರ್ಪಾಟು ಈ ರೀತಿ ಕರ್ತವ್ಯ |
| ಇ) | ಒಂದೇ ಇಲಾಖೆ, ಒಂದೇ ಸ್ಥಳ ಹಾಗೂ ಒಂದೇ ಕೆಲಸ ಮಾಡುವ ಉದ್ಯೋಗಿಗಳ ನಡುವೆ ಸುಮಾರು 25 ರಿಂದ 30 ಸಾವಿರ ರೂ ವೇತನ ತಾರತಮ್ಯವಿದ್ದು, ಇದನ್ನು ಸರಿಪಡಿಸಲು ಸರಕಾರ ಇದುವರೆಗೆ ಯಾವುದೇ ಕ್ರಮವಹಿಸದೇ ಇರಲು ಕಾರಣಗಳೇನು; | |
| ಈ) | ಯಾವ ಕಾಲಮಿತಿಯೊಳಗೆ ಸದರಿ ನೌಕರರ ವೇತನ ತಾರತಮ್ಯ ನಿವಾರಣೆ ಹಾಗೂ ವೇತನ ಪರಿಷ್ಕರಣೆಗೆ ಅಗತ್ಯ ಕ್ರಮ ವಹಿಸಲಾಗುವುದು? | |

| ಪ್ರಶ್ನೆ | ಉತ್ತರ |
| --- | --- |
| | ನಿರ್ವಹಿಸುತ್ತಿದ್ದ ನೌಕರರಿಗೂ ಗಮನಾರ್ಹ ಅಂತರದಲ್ಲಿ ವೇತನ ತಾರತಮ್ಯ ಕಂಡುಬಂದದ್ದನ್ನು ಗಂಭೀರವಾಗಿ ಪರಿಗಣಿಸಿ ಈ ವೇತನ ತಾರತಮ್ಯವನ್ನು ಇಲಾಖೆಯ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ಪರಿಶೀಲಿಸಿ ಸರಿಪಡಿಸುವುದಕ್ಕಾಗಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019ರ ನಿಯಮ 8ರ ಕೋಷ್ಟಕದಲ್ಲಿನ ವೇತನ ಶ್ರೇಣಿ ಮತ್ತು ಇತರೆ ಭತ್ಯೆಗಳನ್ನು ದಿನಾಂಕ:17.07.2019 ರಿಂದ ಜಾರಿಗೆ ಬರುವಂತೆ ಕೆಲವು ಷರತ್ತುಗಳನ್ನು ವಿಧಿಸಿ ಆದೇಶವನ್ನು ಹೊರಡಿಸಲಾಗಿರುತ್ತದೆ.<br><br>ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019ರ ನಿಯಮ 8ರ ಕೋಷ್ಟಕದಲ್ಲಿನ ವೇತನ ಶ್ರೇಣಿ ಮತ್ತು ಇತರೆ ಭತ್ಯೆಗಳನ್ನು ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯದ ಅರ್ಚಕರು/ನೌಕರರು ತಮಗೂ ಸಹ ಸರ್ಕಾರಿ ವೇತನ ಶ್ರೇಣಿ ನಿಗಧಿಪಡಿಸುವಂತೆ ಬೇಡಿಕೆ ಸಲ್ಲಿಸಿರುವ ಕಾರಣದಿಂದ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದೇವಾಲಯದ ಅರ್ಚಕರು/ನೌಕರರ ವೇತನ ತಾರತಮ್ಯವನ್ನು ಸರಿಪಡಿಸಲು ಸುದೀರ್ಘವಾಗಿ ಚರ್ಚಿಸಿ ನಿವೃತ್ತ ನ್ಯಾಯಾಧೀಶರನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಿ, ಆ ಮೂಲಕ ವೇತನ ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಆಮೂಲಾಗ್ರವಾಗಿ ಪರಿಶೀಲಿಸಿ ವರದಿ ಪಡೆದು ವೇತನ ತಾರತಮ್ಯವನ್ನು ಸರಿಪಡಿಸಲು ಕ್ರಮ ವಹಿಸುವಂತೆ ಸೂಚನೆ ನೀಡಿರುವ ಮೇರೆಗೆ ನಿವೃತ್ತ ನಾಯಾಧೀಶರನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ |

ಸಂಖ್ಯೆ: ಕಂಇ 96 ಮುಸಪ್ರ 2025

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು